# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002

***ಪತ್ರಿಕಾ ಪ್ರಕಟಣೆ*** **ದಿನಾಂಕ: 20.09.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಪೂಜ್ಯ ಮಹಾಪೌರರು ಇಂದು ಮೈಸೂರು ರಸ್ತೆ ಅಗಲೀಕರಣ, ಗಾಳಿ ಆಂಜನೇಯಸ್ವಾಮಿ ದೇವಸ್ಥಾನದ ಹತ್ತಿರ ವೃಷಭಾವತಿ ನಾಲೆಯಿಂದ ಹೂಳೆತ್ತುವ ಕಾರ್ಯ ಮತ್ತು ಮೆಟ್ರೋ ಮಾರ್ಗಗಳಲ್ಲಿ ಬರುವ ರಸ್ತೆ ದುರಸ್ಥಿ ಕಾರ್ಯವನ್ನು ಪರಿಶೀಲಿಸಿದರು. ಮೆಟ್ರೋ ಮಾರ್ಗಗಳಲ್ಲಿ ಬರುವ ರಸ್ತೆಗಳು ಹಾಳಾಗಿ ಸಾರ್ವಜನಿಕರ ಓಡಾಟಕ್ಕೆ ಮತ್ತು ವಾಹನ ಸಂಚಾರಕ್ಕೆ ತೊಂದರೆಯಾಗಿರುವ ಹಿನ್ನೆಲೆಯಲ್ಲಿ ಅವುಗಳನ್ನು ಕೂಡಲೇ ದುರಸ್ಥಿ ಮಾಡಲು 15 ದಿನಗಳ ಹಿಂದೆ ಗಡುವು ನೀಡಿದರೂ ಕೂಡಾ ಮೆಟ್ರೋ ಮತ್ತು ಜಲಮಂಡಳಿ ಅಧಿಕಾರಿಗಳು ಕ್ರಮ ಕೈಗೊಳ್ಳದೇ ಇರುವ ಕಾರಣ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ಮೈಸೂರು ರಸ್ತೆ ಅಗಲೀಕರಣಕ್ಕಾಗಿ ಜಲಮಂಡಳಿ, ಬೆಸ್ಕಾಂ, ಬಿ.ಎಸ್.ಎನ್.ಎಲ್. ಕೇಬಲ್‌ಗಳು ಮತ್ತು ಪೈಪ್‌ಗಳನ್ನು ಸ್ಥಳಾಂತರಗೊಳಿಸಲು ಸೂಚಿಸಿರುವ ಹಿನ್ನೆಲೆಯಲ್ಲಿ ಸಿರ್ಸಿ ವೃತ್ತ ಮೇಲ್ಸೇತುವೆಯಿಂದ ಗೋಪಾಲ್ ಮಾಲ್‌ವರೆಗೂ ಈ ಮೇಲಿನ ಎಲ್ಲಾ ಸಂಸ್ಥೆಗಳಿಂದ ಬಹುತೇಕ ಕಾಮಗಾರಿಗಳು ಪೂರ್ಣಗೊಂಡಿದ್ದು, ಮಳೆ ಕಡಿಮೆಯಾದ ತಕ್ಷಣವೇ ಪಾಲಿಕೆಯಿಂದ ರಸ್ತೆ ನಿರ್ಮಾಣ ಕಾಮಗಾರಿ ಕೈಗೊಳ್ಳಲು ಮುಖ್ಯ ಅಭಿಯಂತರರು (ಬೃಹತ್ ರಸ್ತೆಗಳು) ರವರಿಗೆ ಪೂಜ್ಯ ಮಹಾಪೌರರು ತಿಳಿಸಿದರು.

ಗಾಳಿ ಆಂಜನೇಯ ದೇವಸ್ಥಾನದ ಹತ್ತಿರ ವೃಷಭಾವತಿ ನಾಲೆಯಿಂದ ಹೂಳೆತ್ತುವ ಕಾರ್ಯವನ್ನು ಪರಿಶೀಲಿಸಿದರು. ಕಳೆದ 15 ದಿನಗಳಿಂದ ನಿರಂತರವಾಗಿ ಹೂಳೆತ್ತಿರುವುದರಿಂದ ನಿನ್ನೆ ರಾತ್ರಿ ಆದ ಮಳೆಯಿಂದ ಯಾವುದೇ ಅನಾಹುತಗಳು ಸಂಭವಿಸಿರುವುದಿಲ್ಲ. ಮತ್ತು ದೇವಸ್ಥಾನದ ಹತ್ತಿರ ಮತ್ತು ಇನ್ನೂ ಕೆಲವು ಕಡೆ ಹೂಳೆತ್ತುವ ಕಾರ್ಯ ಪ್ರಗತಿಯಲ್ಲಿದ್ದು, ಅದನ್ನು ಸಂಪೂರ್ಣಗೊಳಿಸಲು ಅಭಿಯಂತರರುಗಳಿಗೆ ಸೂಚನೆ ನೀಡಿದರು.

ಮೆಟ್ರೋ ಮಾರ್ಗದ ರಸ್ತೆಗಳಾದ ವಿಜಯನಗರ ಮುಖ್ಯರಸ್ತೆ, ಮಾಗಡಿ ರಸ್ತೆ, ವೆಸ್ಟ್ ಆಫ್ ಕಾರ್ಡ್ ಮುಂತಾದ ಕಡೆ ತಪಾಸಣೆ ಮಾಡಿ, ಮೆಟ್ರೋ ಅಧಿಕಾರಿಗಳೇ ಸ್ವತಃ 15 ದಿನಗಳ ಹಿಂದೆ ರಸ್ತೆ ದುರಸ್ಥಿ ಕಾರ್ಯ ಮಾಡುವುದಾಗಿ ಆಶ್ವಾಸನೆ ನೀಡಿದರೂ ಕೂಡಾ ಇದುವರೆವಿಗೂ ನಿರ್ವಹಿಸದೇ ಇರುವ ಕಾರಣ ಪೂಜ್ಯ ಮಹಾಪೌರರು ಅಸಮಾಧಾನ ವ್ಯಕ್ತಪಡಿಸಿದರು. ಮೆಟ್ರೋ ಅಧಿಕಾರಿಗಳೇ ಈ ತಿಂಗಳ 25ರ ಒಳಗಾಗಿ ರಸ್ತೆ ಗುಂಡಿಗಳನ್ನು ಮುಚ್ಚುವುದಾಗಿ ತಿಳಿಸಿದರೂ ಕೂಡಾ ಕೆಲಸ ನಿರ್ವಹಿಸಿರುವುದಿಲ್ಲ. ಮೆಟ್ರೋ ಅಧಿಕಾರಿಗಳಿಗೆ ಮತ್ತೊಮ್ಮೆ ಕಟ್ಟುನಿಟ್ಟಿನ ಆದೇಶ ನೀಡಿ, ಕೂಡಲೇ ಕಾರ್ಯವನ್ನು ಪ್ರಾರಂಭಿಸಲು ಸೂಚಿಸಿದರು.

ಇಸ್ಕಾನ್ ದೇವಸ್ಥಾನದ ಹತ್ತಿರ ಒಳಚರಂಡಿಯಿಂದ ಕೊಳಚೆ ನೀರು ಉಕ್ಕಿ ಹರಿಯುತ್ತಿದ್ದು, ಇದನ್ನು ದುರಸ್ಥಿಪಡಿಸಲು ಏಕೆ ವಿಳಂಬ ಮಾಡುತ್ತಿದ್ದೀರಿ? ಜಲಮಂಡಳಿಯ ಅಧಿಕಾರಿಗಳಿಗೆ ಸೂಚನೆ ನೀಡಿದ್ದರೂ ಕೂಡಾ ಈ ಕಡೆ ಗಮನಹರಿಸದೇ ಇರುವುದು ತುಂಬಾ ಶೋಚನೀಯ ವಿಷಯವಾಗಿದೆ ಎಂದು ತಿಳಿಸಿದರು. ಅದಕ್ಕೆ ಜಲಮಂಡಳಿಯ ಪ್ರಧಾನ ಅಭಿಯಂತರರು ಈ ಸ್ಥಳದಲ್ಲಿ ಹೊಸ ಪೈಪ್‌ಗಳನ್ನು ಅಳವಡಿಸಲು ಟೆಂಡರ್ ಪ್ರಕ್ರಿಯೆ ಮುಗಿದಿದ್ದು, ಇನ್ನೂ 15 ದಿನಗಳ ಒಳಗಾಗಿ ಈ ಸಮಸ್ಯೆಗೆ ಖಾಯಂ ಆಗಿ ಪರಿಹಾರ ಒದಗಿಸಿಕೊಡುವುದಾಗಿ ತಿಳಿಸಿದರು.

ತದನಂತರ ಕದಿರೇನಹಳ್ಳಿ ಅಂಡರ್‌ಪಾಸ್ ನಿರ್ಮಾಣ ಕಾಮಗಾರಿ ಪರಿಶೀಲನೆ ನಡೆಸಿ, ಈಗಾಗಲೇ ಹಲವಾರು ಬಾರಿ ಗುತ್ತಿಗೆದಾರರಿಗೆ ಕಾಮಗಾರಿ ಪೂರ್ಣಗೊಳಿಸಲು ಅಂತಿಮ ಗಡುವು ನೀಡಲಾಗಿದೆ. ಮತ್ತು ಅವರ ಮೇಲೆ ದಂಡ ಕೂಡಾ ವಿಧಿಸಲಾಗಿದೆ. ಆದರೂ ಕಾಮಗಾರಿ ತ್ವರಿತಗತಿಯಲ್ಲಿ ನಡೆಯುತ್ತಿರುವುದಿಲ್ಲ. ಆದ್ದರಿಂದ ಕಾರ್ಯಪಾಲಕ ಅಭಿಯಂತರರಿಗೆ ಸೂಚನೆ ನೀಡಿ, ಗುತ್ತಿಗೆದಾರರ ಮೇಲೆ ಒತ್ತಡ ಹೇರಲು ಮತ್ತು ಹೆಚ್ಚಿನ ಪ್ರಮಾಣದ ಕಾರ್ಮಿಕರನ್ನು ಮತ್ತು ಯಂತ್ರಗಳನ್ನು ಬಳಸುವ ರೀತಿಯಲ್ಲಿ ನಿಗಾವಹಿಸಲು ಕ್ರಮ ಕೈಗೊಳ್ಳಬೇಕೆಂದು ಮಹಾಪೌರರು ತಿಳಿಸಿದರು.

ತಪಾಸಣೆ ಸಂದರ್ಭದಲ್ಲಿ ಉಪ ಮಹಾಪೌರರಾದ ಶ್ರೀ ಎಸ್. ಹರೀಶ್, ಆಡಳಿತ ಪಕ್ಷದ ನಾಯಕರಾದ ಶ್ರೀ ಬಿ.ಆರ್. ನಂಜುಂಡಪ್ಪ, ಪಾಲಿಕೆ ಸದಸ್ಯರುಗಳಾದ ಶ್ರೀ ವಿ.ಕೃಷ್ಣ, ಶ್ರೀ ಆರ್.ಚಂದ್ರಶೇಖರ್‌ಯ್ಯ, ಶ್ರೀ ಎ.ಹೆಚ್.ಬಸವರಾಜು ಹಾಗೂ ಮುಂತಾದವರು ಹಾಜರಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 20.09.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು ಇಂದು ವಲಯ ಜಂಟಿ ಆಯುಕ್ತರು ಮತ್ತು ಉಪ ಆಯುಕ್ತರ ಸಭೆ ಕರೆದು, ಆಸ್ತಿ ತೆರಿಗೆ ವಸೂಲಾತಿ ಕಾರ್ಯವನ್ನು ಇನ್ನೂ ತ್ವರಿತಗತಿಯಲ್ಲಿ ಮಾಡಲು ಮತ್ತು ನಿಗದಿಪಡಿಸಿದ ಗುರಿ ಮುಟ್ಟಲು ಕ್ರಮ ಕೈಗೊಳ್ಳಲು ಕಟ್ಟುನಿಟ್ಟಿನ ಆದೇಶ ನೀಡಿದರು. ಸಭೆಯಲ್ಲಿ ಅಧಿಕಾರಿಗಳಿಗೆ ಈ ಕೆಳಕಂಡಂತೆ ಸೂಚನೆ ನೀಡಿದರು.

1) ಭೌಗೋಳಿಕ ಮಾಹಿತಿ ತಂತ್ರಜ್ಞಾನವನ್ನು ಅಳವಡಿಸಿ ನಗರ ಪಾಲಿಕೆಯಲ್ಲಿನ ಎಲ್ಲಾ ಆಸ್ತಿಗಳಿಗೆ ಹೊಸ ಪಿ.ಐ.ಡಿ. ಸಂಖ್ಯೆಗಳನ್ನು ನೀಡಿ, ತೆರಿಗೆದಾರರಿಗೆ ನೋಟಿಸುಗಳನ್ನು ನವೆಂಬರ್ ಮೊದಲನೇ ವಾರದೊಳಗಾಗಿ ನೀಡಲು ಕಂದಾಯ ಇಲಾಖೆಯ ಎಲ್ಲಾ ಅಧಿಕಾರಿಗಳಿಗೆ ಸೂಚಿಸಲಾಗಿದೆ.
2) ಆಸ್ತಿ ತೆರಿಗೆ ಜಾಲದಲ್ಲಿ ಇಲ್ಲದೆ ಇರುವ ಆಸ್ತಿಗಳನ್ನು ಆಸ್ತಿ ತೆರಿಗೆ ನಿಗದಿಪಡಿಸಿ ತೆರಿಗೆದಾರರಿಗೆ ವಿಶೇಷ ಸೂಚನಾ ಪತ್ರಗಳನ್ನು ಡಿಸೆಂಬರ್ 2011ರ ಅಂತ್ಯದೊಳಗಾಗಿ ಜಾರಿಗೊಳಿಸಲು ಸೂಚಿಸಲಾಗಿದೆ.
3) ಆಸ್ತಿ ತೆರಿಗೆ ಬಾಕಿ ಇರುವ ತೆರಿಗೆದಾರರಿಗೆ ನೋಟಿಸುಗಳನ್ನು ಜಾರಿ ಮಾಡಿ ದಂಡ ಸಮೇತ ವಸೂಲು ಮಾಡಲು ಕಾರ್ಯಕ್ರಮಗಳನ್ನು ರೂಪಿಸಿ ಅಗತ್ಯವಿದ್ದಲ್ಲಿ ಜಪ್ತಿ ವಾರಂಟ್‌ಗಳನ್ನು ಜಾರಿ ಮಾಡಿ ತೆರಿಗೆಯನ್ನು ವಸೂಲಿ ಮಾಡುವಲ್ಲಿ ಎಲ್ಲಾ ವಲಯ ಅಪರ / ಜಂಟಿ ಆಯುಕ್ತರುಗಳಿಗೆ ಸೂಚಿಸಲಾಗಿದೆ.
4) ಸ್ವಯಂ ಘೋಷಣೆ ಆಸ್ತಿ ತೆರಿಗೆ ಪದ್ಧತಿ ಅಡಿಯಲ್ಲಿ ಸಲ್ಲಿಸಲಾಗಿರುವ ಘೋಷಣೆಗಳ ಪೈಕಿ ಶೇಕಡ 10 ರಷ್ಟು ಪರಿಶೀಲನೆ ಕೈಗೊಂಡು ವ್ಯತ್ಯಾಸದ ಸಮೇತ ಆಸ್ತಿ ತೆರಿಗೆ ವಸೂಲು ಮಾಡಲು ಕಂದಾಯ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಸದರಿ ಪರಿಶೀಲನಾ ಕಾರ್ಯವನ್ನು ಡಿಸೆಂಬರ್ 2011ರ ಅಂತ್ಯದೊಳಗೆ ಪೂರ್ಣಗೊಳಿಸಲು ಸೂಚಿಸಲಾಗಿದೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**